# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮಂಜುನಾಥ್ ಭಂಡಾರಿ ಇವರು ನಿಯಮ 330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ

### ವಿಷಯ:

ದೇಶದೆಲ್ಲಡೆ 2015 ರ ಜೂನ್ 25 ರಂದು ಸ್ಮಾರ್ಟ್ ಸಿಟಿ ಅಭಿಯಾನವು ಆರಂಭಗೊಂಡಿದೆ. ಇದು ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಭಾಗಿತ್ವದ ಯೋಜನೆಯಾಗಿದೆ. ಪ್ರಾರಂಭಿಕವಾಗಿ ಕೇಂದ್ರವು ರೂ.7.2 ಲಕ್ಷ ಕೋಟಿ ಅನುದಾನವನ್ನು ಸ್ಮಾರ್ಟ್ ಸಿಟಿ ಅಭಿಯಾನಕ್ಕೆ ಕಾಯ್ದಿರಿಸಿದೆ. ದೇಶದಾದ್ಯಂತ 5 ಸುತ್ತುಗಳಲ್ಲಿ 100 ನಗರಗಳನ್ನು ಆಯ್ಕೆ ಮಾಡಲಾಗಿದೆ. ಕರ್ನಾಟಕ ರಾಜ್ಯದಲ್ಲಿ ಕೇಂದ್ರ ಸರ್ಕಾರ ಪ್ರಾಯೋಜಿತ ಸ್ಮಾರ್ಟ್ ಸಿಟಿ ಅಭಿಯಾನದಡಿ ರಾಜ್ಯದ 7 ನಗರಗಳಾದ ಬೆಳಗಾವಿ, ದಾವಣಗೆರೆ, ಹುಬ್ಬಳ್ಳಿ-ಧಾರವಾಡ, ಮಂಗಳೂರು, ಶಿವಮೊಗ್ಗ, ತುಮಕೂರು ಹಾಗೂ ಬೆಂಗಳೂರು ನಗರಗಳು ಆಯ್ಕೆಯಾಗಿರುತ್ತವೆ.

ಪ್ರತಿ ನಗರಕ್ಕೆ ಲಭ್ಯವಾಗುವ ರೂ.1000.00 ಕೋಟಿ ಸ್ಮಾರ್ಟ್ ಸಿಟಿ ಅನುದಾನದಲ್ಲಿ ಈವರೆಗೆ ರಾಜ್ಯದ 7 ನಗರಗಳಲ್ಲಿ ಒಟ್ಟು ರೂ.5693.88 ಕೋಟಿ ಅನುದಾನವನ್ನು ವ್ಯಯಿಸಲಾಗಿದೆ. ಮಂಗಳೂರು ನಗರಕ್ಕೆ ಈ ಯೋಜನೆಯಡಿ ಒಟ್ಟು ರೂ.806.00 ಕೋಟಿ ಅನುದಾನ ಬಿಡುಗಡೆಯಾಗಿದ್ದು, ರೂ.739.39 ಕೋಟಿ ಬಳಸಲಾಗಿದೆ. ರಾಜ್ಯದಲ್ಲಿ 7 ನಗರಗಳಲ್ಲಿ ಈವರೆಗೆ ಸರಿಸುಮಾರು ಶೇ.92 ರಿಂದ 95ರಷ್ಟು ಅನುದಾನ ಬಳಕೆಯಾಗಿದೆ. ಆದರೆ, ಮಂಗಳೂರು ಸೇರಿದಂತೆ ರಾಜ್ಯದ ಇತರೇ ನಗರಗಳಲ್ಲಿ ಸ್ಮಾರ್ಟ್ ಸಿಟಿ ಅಭಿಯಾನದಡಿ ಕೈಗೊಂಡ ಕಾಮಗಾರಿಗಳು ಕಳಪೆಯಾಗಿದ್ದು ಅವೈಜ್ಞಾನಿಕವಾಗಿದೆ. ಪ್ರಾದೇಶಿಕ ಅವಶ್ಯಕತೆಗಳಿಗೆ ಅನುಗುಣವಾಗಿ ಯೋಜನೆ ರೂಪಿಸದೇ, ಕಾನೂನು ಉಲ್ಲಂಘಿಸಿ ಯೋಜನೆಗಳನ್ನು ಅನುಷ್ಠಾನಿಸಿರುವ ಕುರಿತು.

### ಉತ್ತರ:

ಸ್ಮಾರ್ಟ್ ಸಿಟಿ ಅಭಿಯಾನವು 2015 ರಂದು ಪ್ರಾರಂಭಿಸಲಾಗಿದ್ದು, ಅಭಿಯಾನದಡಿ ಆಯ್ಕೆಯಾಗಲು ನಗರಗಳು ತನ್ನ ಸರ್ವತೋಮುಖ ಅಭಿವೃದ್ಧಿಯನ್ನು ಗಮನದಲ್ಲಿರಿಸಿಕೊಂಡು ಸ್ಮಾರ್ಟ್ ಸಿಟಿ ಪ್ರಸ್ತಾವನೆಗಳನ್ನು ಸಿದ್ದಪಡಿಸಿರುತ್ತವೆ. ಈ ಪ್ರಸ್ತಾವನೆಗಳನ್ನು ಆಯಾಯಾ ನಗರಗಳ ನಾಗರೀಕರೊಂದಿಗೆ, ಚುನಾಯಿತ ಪ್ರತಿನಿಧಿಗಳೊಂದಿಗೆ, ವಿಷಯ ಪರಿಣಿತರೊಂದಿಗೆ ಚರ್ಚಿಸಿ, ಪ್ರಸ್ತಾವನೆಯನ್ನು ಸಿದ್ದಪಡಿಸಿ, ಆ ನಗರದ ಕೌನ್ಸಿಲ್ ಸಭೆಯಲ್ಲಿ ಚರ್ಚಿಸಿ, ಅನುಮೋದನೆ ಪಡೆದ ನಂತರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯ ರಾಜ್ಯ ಉನ್ನತ ಮಟ್ಟದ ಸಂಚಾಲನ ಸಮಿತಿ ಸಭೆಯ ಅನುಮೋದನೆ ಪಡೆದು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿ, ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ.

ಅಭಿಯಾನದಡಿ ಆಯ್ಕೆಗೊಂಡ ನಂತರ ಯೋಜನಾ ಅನುಷ್ಠಾನದ ಸಮಯದಲ್ಲಿ ಕೆಲವು ಯೋಜನೆಗಳಿಗೆ ತಾಂತ್ರಿಕ/ಆರ್ಥಿಕ/ಭೂಸ್ವಾದೀನ/ಕಾನೂನು ಅಡಚಣೆಗಳಂತಹ ಹಲವಾರು ಸವಾಲುಗಳು ಎದುರಾಗಿರುತ್ತವೆ. ಅಲ್ಲದೇ, ಇನ್ನು ಕೆಲವು ಯೋಜನೆಗಳನ್ನು ಸಂಬಂಧಿಸಿದ ಇಲಾಖೆಗಳು ಅನುಷ್ಠಾನಗೊಳಿಸಲು ಕೈಗೆತ್ತಿಕೊಂಡಿರುತ್ತವೆ.

ಈ ಹಿನ್ನೆಲೆಯಲ್ಲಿ, ಕೇಂದ್ರ ಸರ್ಕಾರವು ನಗರಗಳ ಸ್ಮಾರ್ಟ್ ಸಿಟಿ ಪ್ರಸ್ತಾವನೆಯನ್ನು ಪರಿಷ್ಕರಿಸಲು ದಿನಾಂಕ:07.08.2018 ರಂದು ಕಾರ್ಯಸಾಧುವಲ್ಲದ ಯೋಜನೆಗಳನ್ನು ಕೈಬಿಟ್ಟು ನಗರಗಳಿಗೆ ಅವಶ್ಯವಿರುವ ಕಾಮಗಾರಿಗಳನ್ನು ತೆಗೆದುಕೊಳ್ಳಲು ಒಂದು ಬಾರಿಯ ಅವಕಾಶ ನೀಡಿರುತ್ತದೆ. ಅದರಂತೆ, ನಗರಗಳು ಅದರ ಅವಶ್ಯಕತೆ ಅನುಸಾರ ಕಾರ್ಯಸಾಧುವಲ್ಲದ ಯೋಜನೆಗಳನ್ನು ಕೈಬಿಟ್ಟು ತುರ್ತು ಅವಶ್ಯವಿರುವ ಕಾಮಗಾರಿಗಳನ್ನು ಕೈಗೊಂಡಿರುತ್ತವೆ.

ಈ ಪರಿಷ್ಕೃತ ಪ್ರಸ್ತಾವನೆಗಳನ್ನು ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯ ರಾಜ್ಯ ಉನ್ನತ ಮಟ್ಟದ ಸಂಚಾಲನ ಸಮಿತಿ ಸಭೆಯ ಅನುಮೋದನೆ ಪಡೆದು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿ, ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ.

ಮುಂದುವರೆದು, ಯೋಜನಾ ಅನುಷ್ಠಾನದಲ್ಲಿ ಸಲಹೆ ಸೂಚನೆಗಳನ್ನು ನೀಡಲು, ಯೋಜನಾ ಅನುಷ್ಠಾನದಲ್ಲಿ ಎದುರಾಗುವ ಸವಾಲುಗಳಿಗೆ ಪರಿಹಾರ ಕಂಡುಕೊಳ್ಳಲು ನಗರಾಭಿವೃದ್ಧಿ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರುಗಳ ಅಧ್ಯಕ್ಷತೆಯಲ್ಲಿ ಆಯಾ ನಗರಗಳ ವಿಧಾನಸಭಾ ಸದಸ್ಯರು, ಸ್ಥಳೀಯ ಸಂಸ್ಥೆಯ ಚುನಾಯಿತ ಸದಸ್ಯರುಗಳನ್ನೊಳಗೊಂಡ "ಸ್ಮಾರ್ಟ್ ಸಿಟಿ ಅನುಷ್ಠಾನ ಮತ್ತು ಪರಿಶೀಲನಾ ಸಮಿತಿ"ಯನ್ನು ರಚಿಸಲಾಗಿದೆ.

ಇದಲ್ಲದೇ, ಎಲ್ಲಾ ನಗರಗಳಲ್ಲಿ "ಸ್ಮಾರ್ಟ್ ಸಿಟಿ ಅಡ್ವೈಸರಿ ಫೋರಂ"ಅನ್ನು ಸ್ಥಾಪಿಸಲಾಗಿದೆ. ಈ ಸಮಿತಿಯಲ್ಲಿ ಆಯಾ ನಗರಗಳ ಸಂಸತ್ ಸದಸ್ಯರು, ವಿಧಾನ ಸಭಾ ಸದಸ್ಯರು, ಮಹಾಪೌರರು, ಜಿಲ್ಲಾಧಿಕಾರಿಗಳು, ವ್ಯವಸ್ಥಾಪಕ ನಿರ್ದೇಶಕರು ಸ್ಮಾರ್ಟ್ ಸಿಟಿ ಲಿಮಿಟೆಡ್, ತಾಂತ್ರಿಕ ತಜ್ಞರು, ವಾಣಿಜ್ಯ ಮಂಡಳಿಯ ಸದಸ್ಯರು, ಸ್ವಯಂ ಸೇವಾ ಸಂಸ್ಥೆ ಸದಸ್ಯರು ಹಾಗೂ ಇತರೆ ಸಮುದಾಯ ಆಧಾರಿತ ಸಂಸ್ಥೆಗಳ ಪ್ರತಿನಿಧಿಗಳು ಪಾಲ್ಗೊಳ್ಳುತ್ತಿದ್ದು ಕಾಮಗಾರಿಗಳ ಆಯ್ಕೆ ಹಾಗೂ ಅನುಷ್ಠಾನದಲ್ಲಿ ಎದುರಾಗುವ ಸಮಸ್ಯೆಗಳನ್ನು ಬಗೆಹರಿಸಲಾಗುತ್ತಿದೆ.

ಮೇಲೆ ವಿವರಿಸಿದಂತೆ ಸ್ಮಾರ್ಟ್ ಸಿಟಿ ಪ್ರಸ್ತಾವನೆಯಲ್ಲಿನ ಕಾಮಗಾರಿಗಳನ್ನು ಹಲವಾರು ಹಂತಗಳಲ್ಲಿ ಚರ್ಚಿಸಿ ನಗರಗಳಿಗೆ ಅವಶ್ಯವಿರುವ ಕಾಮಗಾರಿಗಳನ್ನು ಆರ್ಥಿಕ ಸಂಪನ್ಮೂಲಗಳಿಗೆ ಅನುಸಾರವಾಗಿ ಕೈಗೊಳ್ಳಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಸ್ಮಾರ್ಟ್ ಸಿಟಿ ಕಾಮಗಾರಿಗಳನ್ನು ಪ್ರಾದೇಶಿಕ/ನಗರದ ಅವಶ್ಯಕತೆಗಳಿಗೆ ಮತ್ತು ಆರ್ಥಿಕ ಸಂಪನ್ಮೂಲಗಳಿಗೆ ಅನುಸಾರವಾಗಿ ಅಭಿಯಾನದ ಮಾರ್ಗಸೂಚಿ ಅನುಸಾರ ಕೈಗೆತ್ತಿಕೊಂಡು ಅನುಷ್ಠಾನಗೊಳಿಸಲಾಗುತ್ತದೆ.

ಸ್ಮಾರ್ಟ್ ಸಿಟಿ ಯೋಜನೆಯಡಿ ಪ್ರಮುಖವಾಗಿ ಸ್ಮಾರ್ಟ್ ರಸ್ತೆಗಳ ಅಭಿವೃದ್ಧಿ, ಒಳಚರಂಡಿ, ಉದ್ಯಾನವನಗಳ ಅಭಿವೃದ್ಧಿ, ಕೆರೆ ಹಾಗೂ ನದಿ ಪ್ರದೇಶಗಳ ಅಭಿವೃದ್ಧಿ, I.C.T ಕಾಮಗಾರಿಗಳು, ಮಾರುಕಟ್ಟೆಗಳ ಅಭಿವೃದ್ಧಿ, ಪಾರ್ಕಿಂಗ್ ಪ್ರದೇಶಗಳ ಅಭಿವೃದ್ಧಿ, ಪಿಪಿಪಿ ಮಾದರಿಯಲ್ಲಿ ಸೌರಶಕ್ತಿ ಯೋಜನೆ, LED ಬೀದಿ ದೀಪಗಳ ಅಳವಡಿಕೆ ಹಾಗೂ ಇನ್ನಿತರೆ ಮೂಲಸೌಕರ್ಯ ಅಭಿವೃದ್ಧಿ ಯೋಜನೆಗಳನ್ನು ಎಲ್ಲಾ 7 ನಗರಗಳಲ್ಲಿ ಹಮ್ಮಿಕೊಳ್ಳಲಾಗಿದೆ.

--3

ಸ್ಮಾರ್ಟ್ ರಸ್ತೆಗಳನ್ನು ನಗರದ ಜನನಿಬಿಡ ಪ್ರದೇಶಗಳಲ್ಲಿ ಅನುಷ್ಠಾನಗೊಳಿಸಬೇಕಾಗಿದ್ದು, ಬೆಸ್ಕಾಂ ಬಿಎಸ್ಎನ್ಎಲ್, ನೀರು ಸರಬರಾಜು ಮಂಡಳಿ ಹಾಗೂ ಇತರೆ ಇಲಾಖೆಗಳ "ಯುಟಿಲಿಟಿ ಶಿಫ್ಟಿಂಗ್" ನಂತರ ಮಾತ್ರ ಕಾಮಗಾರಿ ಪ್ರಾರಂಭಿಸಬೇಕಾಗಿರುವ ಕಾರಣ ರಸ್ತೆ ಕಾಮಗಾರಿಗಳ ಅನುಷ್ಠಾನಕ್ಕೆ ಹೆಚ್ಚಿನ ಸಮಯ ಅಗತ್ಯವಿರುತ್ತದೆ. ಈ ಬಗ್ಗೆ ಆಯಾ ಜಿಲ್ಲಾಧಿಕಾರಿಗಳು ಸಮನ್ವಯ ಸಮಿತಿ ಸಭೆಗಳ ಮೂಲಕ ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಕ್ರಮ ವಹಿಸುತ್ತಿದ್ದಾರೆ.

ನಗರಗಳಲ್ಲಿ ಸ್ಮಾರ್ಟ್ ಸಿಟಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಸ್ಥಾಪಿಸಲಾಗಿರುವ ವಿಶೇಷ ಉದ್ದೇಶಿತ ವಾಹನಗಳಿಗೆ ಯೋಜನಾ ಅನುಷ್ಠಾನದಲ್ಲಿ ತಾಂತ್ರಿಕ ಸಲಹೆಗಳನ್ನು ನೀಡಲು ಯೋಜನಾ ಸಮಾಲೋಚಕರನ್ನು ನೇಮಿಸಿಕೊಳ್ಳಲಾಗಿದೆ. ಯೋಜನಾ ಸಮಾಲೋಚಕರು ಮತ್ತು ವಿಶೇಷ ಉದ್ದೇಶಿತ ವಾಹನಗಳು ಕಾಮಗಾರಿಗಳನ್ನು ಉತ್ತಮ ಗುಣಮಟ್ಟದಲ್ಲಿ ಅನುಷ್ಠಾನಗೊಳಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಂಡಿವೆ. ಕಾಮಗಾರಿಯ ಅನುಷ್ಠಾನದ ಸಮಯದಲ್ಲಿ ಯೋಜನಾ ಸಮಾಲೋಚಕರು ಕಾಮಗಾರಿಯ ಗುಣಮಟ್ಟತೆಯನ್ನು ಪರಿಶೀಲಿಸಿ, ವರದಿಗಳನ್ನು ಸಲ್ಲಿಸುತ್ತಿರುತ್ತಾರೆ. ಇದಲ್ಲದೇ, ಕಾಮಗಾರಿಯ ಗುಣಮಟ್ಟತೆ ಬಗ್ಗೆ ನಿರ್ದಿಷ್ಟ ದೂರು ಬಂದಂತಹ ಪ್ರಕರಣಗಳಲ್ಲಿ ಆಯಾ ನಗರಗಳಲ್ಲಿನ ಇಂಜಿನಿಯರಿಂಗ್ ಕಾಲೇಜು/ಮೂರನೇ ವ್ಯಕ್ತಿ ನೇಮಿಸಿ, ಗುಣಮಟ್ಟದ ಪರಿಶೀಲನೆ ನಡೆಸಲಾಗುತ್ತಿದೆ ಮತ್ತು ಕೆಲವೊಂದು ಸಂದರ್ಭಗಳಲ್ಲಿ ಗುತ್ತಿಗೆದಾರರಿಗೆ ಹಾಗೂ ಯೋಜನಾ ಸಮಾಲೋಚಕರಿಗೆ ದಂಡವನ್ನು ಸಹ ವಿಧಿಸಲಾಗಿದೆ.

**ಸಂಖ್ಯೆ**:ನಅಇ 100 ಸಿಎಸ್ಎಸ್ 2023

14/07/2023

**(ಬಿ.ಎಸ್.ಸುರೇಶ)**

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು